# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 02.05.2019

## ಮಳೆಯಿಂದ ಉಂಟಾಗುವ ಅನಾಹುತ ನಿವಾರಿಸಲು ಅಧಿಕಾರಿಗಳಿಗೆ ಎಚ್ಚರ ವಹಿಸಲು ಸೂಚನೆ: ಮಹಾಪೌರರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಶ್ರೀಮತಿ ಗಂಗಾಂಬಿಕೆ ಮಲ್ಲಿಕಾರ್ಜುನ್ ಹಾಗೂ ಮಾನ್ಯ ಉಪ ಮಹಾಪೌರರಾದ ಶ್ರೀ ಭದ್ರೇಗೌಡ ರವರು ಇಂದು ಮಳೆಯಿಂದ ಯಾವುದೇ ಅನಾಹುತಗಳು ಉಂಟಾಗದಂತೆ, ರಾಜಕಾಲುವೆಗಳು ಮತ್ತು ಮೋರಿಗಳಲ್ಲಿನ ಹೂಳುಗಳನ್ನು ತೆಗೆದು ಸ್ವಚ್ಛವಾಗಿಟ್ಟುಕೊಳ್ಳುವಂತೆ ಬಿಬಿಎಂಪಿ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ತಮ್ಮ ಕೊಠಡಿಯಲ್ಲಿ ವಿಶೇಷ ಆಯುಕ್ತರು (ಯೋಜನೆ) ಹಾಗೂ 8 ವಲಯಗಳ ಮುಖ್ಯ ಅಭಿಯಂತರರೊಂದಿಗೆ ಸಭೆ ನಡೆಸಿ, ಬಿಬಿಎಂಪಿಯ ಉಪ ವಿಭಾಗಗಳಲ್ಲಿ ಸ್ಥಾಪಿಸಿರುವ 64 ನಿಯಂತ್ರಣಾ ಕೊಠಡಿಗಳೊಂದಿಗೆ ಸತತ ಸಂಪರ್ಕ ಇಟ್ಟುಕೊಂಡು ಯಾವುದೇ ಅನಾಹುತಗಳು ಸಂಭವಿಸದಂತೆ, ನಿಗಾವಹಿಸಬೇಕೆಂದು ತಿಳಿಸಿದರು.

ನಗರದಲ್ಲಿನ ಚರಂಡಿಗಳಲ್ಲಿನ ಹೂಳನ್ನು ತೆಗೆದು ಬದಿಯಲ್ಲೇ ಬಿಡಲಾಗುತ್ತಿದೆ ಎಂಬ ದೂರುಗಳು ಕೇಳಿಬಂದಿವೆ. ಕೂಡಲೇ ಆ ಮಣ್ಣನ್ನು ತೆರವುಗೊಳಿಸಬೇಕೆಂದು ಹಾಗೂ ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕು ಎಂದು ತಿಳಿಸಿದರು. ಬಿಬಿಎಂಪಿ ಅಧಿಕಾರಿಗಳು, ಬಿಡಿಎ, ಬೆಸ್ಕಾಂ, ಜಲಮಂಡಳಿ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಬೇಕು. ಮಳೆಗಾಲದಲ್ಲಿ ಯಾವುದೇ ಅನಾಹುತಗಳು ಉಂಟಾದಲ್ಲಿ ಈ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಸಂಪರ್ಕ ಇಟ್ಟುಕೊಳ್ಳಬೇಕು ಹಾಗೂ 182 ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಲಾಗಿದ್ದು, ಸದರಿ ಸ್ಥಳಗಳಲ್ಲಿ ಯಾವುದೇ ಅನಾಹುತವಾಗದ ರೀತಿಯಲ್ಲಿ ಕ್ರಮ ವಹಿಸಬೇಕೆಂದು ಸೂಚಿಸಿದರು.

ಸಾರ್ವಜನಿಕರು ದೂರು ನೀಡಿದ ತಕ್ಷಣ, ಆ ಸಮಸ್ಯೆಗಳನ್ನು ಪರಿಹರಿಸಲು ತಕ್ಷಣವೇ ಕಾರ್ಯೋನ್ಮುಖರಾಗಬೇಕು, ವಾರ್ಡ್‌ಗಳಲ್ಲಿ ಮೀಸಲಿಟ್ಟಿರುವ ಅನುದಾನವನ್ನು ಸದ್ಬಳಕೆ ಮಾಡಿಕೊಂಡು ಸಮಸ್ಯೆ ಉಂಟಾಗದಂತೆ ಎಚ್ಚರವಹಿಸಬೇಕು ಎಂದು ತಿಳಿಸಿದರು.

ನಗರದಲ್ಲಿನ ಕೆಲಕಾಮಗಾರಿಗಳು ವಿಳಂಬಗತಿಯಲ್ಲಿ ನಡೆಯುತ್ತಿವೆ. ಇದರಿಂದ ಹಲವಾರು ಸಮಸ್ಯೆಗಳು ಉಂಟಾಗುತ್ತಿವೆ. ತಂಡಗಳನ್ನು ರಚಿಸಿಕೊಂಡು ಅನಾಹುತಗಳನ್ನು ತಡೆಗಟ್ಟಬೇಕು ಎಂದು ಹೇಳಿದರು. ಪ್ರತಿ ಮಳೆಗಾಲದ ವೇಳೆ ರಸ್ತೆಗಳಲ್ಲಿ ಗುಂಡಿ ಬೀಳುವುದು ಸಾಮಾನ್ಯ ಹಾಗಾಗಿ ಟಾರ್ ರಸ್ತೆಗಳಲ್ಲಿ ಗುಂಡಿ ಬೀಳುವುದನ್ನು ತಪ್ಪಿಸಲು ಈಗಿನಿಂದಲೇ ಗುಂಡಿಗಳನ್ನು ಪತ್ತೆಹಚ್ಚಿ ಮುಚ್ಚುವಂತೆ ಪೂಜ್ಯ ಮಹಾಪೌರರು ರವರು ಸೂಚನೆ ನೀಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**